# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 211/2024**

**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 18-06-2025 ರಂದು ಪ್ರಮಾಣ ಮಾಡಿಸಲಾಯಿತು**

| | | | |
|---|---|---|---|
| **ಸಾಕ್ಷಿಯ ಹೆಸರು** | ಃ ವಿಜಯಕುಮಾರ | | **ಪ್ರಾ.ಸಾ** ಃ 06 |
| **ತಂದೆ ಃ ಗಂಡ ಹೆಸರು** | ಃ ರವಿ ಲಮಾಣಿ | | **ಚಾ.ಸಾ** ಃ 04 |
| **ವಯಸ್ಸು** | ಃ 28 ವರ್ಷ | | |
| **ಉದ್ಯೋಗ** | ಃ ಗುತ್ತಿಗೆದಾರ | | |
| **ವಾಸಸ್ಥಳ** | ಃ ಜುಂಜನಬೈಲ ತಾಂಡಾ | | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ನನಗೆ ಚಾಸಾ-1 ಮತ್ತು 5 ರವರ ಪರಿಚಯ ಇದೆ. ನನಗೆ ಆರೋಪಿಯ ಪರಿಚಯವಿಲ್ಲ.

ಸುಮಾರು ಎರಡು ವರ್ಷಗಳ ಹಿಂದೆ ಕೆಸಲದ ನಿಮಿತ್ತ ಪೋಲಿಸ ಠಾಣೆಗೆ ಹೋದಾಗ ಚಾಸಾ-1 ರವರ ತಂದೆ ಮೃತ ಪಟ್ಟ ಬಗ್ಗ ಪೋಲಿಸರು ನಿಪಿ-2 ಕ್ಕೆ ನನ್ನ ಸಹಿ ಪಡೆದಿರುತ್ತಾರೆ. ನಿಪಿ-2 ರಲ್ಲಿರುವ ಸಾಕ್ಷಿ ಸಹಿಯನ್ನು 2(ಬಿ) ಎಂದು ಗುರುತಿಸಲಾಗಿದೆ. ಅದೇ ರೀತಿ ನಿಪಿ-3 ಕ್ಕೆ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಅಪಘಾತವಾದ ಸ್ಥಳದಲ್ಲಿ ನಿಪಿ-4 ಮತ್ತು 5 ರಂತೆ ಪೋಟೊ ತೆಗೆಸಿರುತ್ತಾರೆ. ನಿಪಿ-2 ಮತ್ತು 3 ರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ. ಅದೇ ದಿನ ನಿಪಿ-6 ಕ್ಕೆ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿ ಸಹಿಯನ್ನು ನಿಪಿ-6(ಬಿ) ಎಂದು ಗುರುತಿಸಿಸಲಾಯಿತು. ಆ ಸಮಯದಲ್ಲಿ ನಿಪಿ-7 ಮತ್ತು 8 ರಂತೆ ಪೋಟೊ ತೆಗೆದಿರುತ್ತಾರೆ. ಕಾರ ಮತ್ತು ಮೋಟಾರ ಸೈಕಲ್ಲ ಸ್ಥಳದಲ್ಲಿ ಇದ್ದವು. ಅವುಗಳ ನಂಬರ ಗೊತ್ತಿಲ್ಲ. ನಿಪಿ-6 ರಲ್ಲಿ ಬರೆದ ವಿಷಯ ಗೊತ್ತಿಲ್ಲ.

*(**ಮಾನ್ಯ ಸ.ಸ.ಅ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು** ಭಾಗಶಃ **ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ,** ಪಾಟೀ ಸವಾಲಿಗೆ ಅನುಮತಿಸಿದೆ)*

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕ 07.10.2022 ರಂದು ಹುಬ್ಬಳ್ಳಿ-ಕಾರವಾರ ಹೆದ್ದಾರಿ ಮೇಲೆ ಜೈಹಿಂದ ದಾಬಾ ಹತ್ತಿರ ಅಪಘಾತವಾದ ಸ್ಥಳದಲ್ಲಿ ಚಾಸಾ-18 ರವರು ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಪಿ-2 ರಂತೆ ಅಪಘಾತವಾದ ಸ್ಥಳದಲ್ಲಿ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-3 ರಂತೆ ಗುನ್ನೆ ಸ್ಥಳದ ನಕಾಶೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಮಧ್ಯಾಹ್ನ 12-30 ರಿಂದ 2-00 ಗಂಟೆಯವರೆಗೆ ಪಂಚನಾಮೆ ಜರುಗಿಸಿ ಅದನ್ನು ಓದಿ ಹೇಳಿದ ನಂತರ ಸ್ಥಳದಲ್ಲಿ ಅವುಗಳಿಗೆ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-4 ಮತ್ತು 5 ರಂತೆ ಪೋಟೊ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಮಧ್ಯಾಹ್ನ 3-30 ರಿಂದ 4-30 ರ ವರೆಗೆ ಕಲಘಟಗಿ ಪೋಲಿಸ ಠಾಣೆ ಆವರಣದಲ್ಲಿ ಅಪಘಾತದಲ್ಲಿ ಭಾಗಿಯಾದ ಕಾರ ನಂ ಕೆಎ-42-ಎ-5975 ಮತ್ತು ಮೋಟಾರ ಸೈಕಲ್ಲ ನಂ ಕೆಎ-25-ಇವಾಯ್-7616 ನೇದ್ದವುಗಳನ್ನು ಜಪ್ತಿ

ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-6 ನ್ನು ಓದಿ ಹೇಳಿದ ನಂತರ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಿಪಿ-7 ಮತ್ತು 8 ರಂತೆ ಫೋಟೊ ತೆಗೆದಿದ್ದಾರೆ ಎಂದರೆ ಸರಿಯಲ್ಲ. ಆರೋಪಿ ನನಗೆ ಪರಿಚಯಸ್ಥ ಆದ್ದರಿಂದ ಅವನಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರಃ ಏನೂ ಎಲ್ಲಃ**

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೆ ಸರಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು,**
**ಕಲಘಟಗಿ.**